ದಿನಾಂಕ: 12.01.2022 ರಂದು ಬೆಳಗ್ಗೆ 10.30 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
3. ಶ್ರೀ ಜಿ.ಸಿ. ಲೋಕೇಶ್ ಅಸೆಸರ್
4. ಶ್ರೀ ಶಿವರಾಂ , ಅರಣ್ಯ ಇಲಾಖೆ
5. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ,
6. ಶ್ರೀ ನಾಗರಾಜ್,ಕೆ.ವಿ. ಸಹಯಕ ಅಭಿಯಂತರರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
7. ಶ್ರೀಮತಿ ದಿವ್ಯಾ, ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
9. ಶ್ರೀ ಶರಣ ಬಸವ, ಮಾರ್ಷಲ್
10. ಶ್ರೀ ಶಿವರಾಮಯ್ಯ, ಸಹಾಯಕ ಸಂಚಾರಿ ನಿರೀಕ್ಷಕರು
11. ಶ್ರೀ ರಾಜಣ್ಣ , ಸದಸ್ಯರು
12. ಶ್ರೀ ಉಮೇಶ್, ಸದಸ್ಯರು
13. ಶ್ರೀ ಆನಂದ್
14. ಶ್ರೀ ಸುರೇಶ್ ಗಡಗೋಳಿ,
15. ಶ್ರೀ ನಾಗರಾಜ್, ಸದಸ್ಯರು,

ದಿನಾಂಕ: 12.01.2022 ರಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಹಿರಿಯ ಆರೋಗ್ಯ ಪರಿವೀಕ್ಷಕರು ಕರೋನಾ ಕೋವಿಡ್-19 ನಮ್ಮ ವಾರ್ಡ್ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಸುಮಾರು 2ನೇ ಡೋಸ್ ತೆಗೆದುಕೊಂಡಿರುವುದಿಲ್ಲ ಅವರಿಗೆ ಪ್ರತಿ ದಿವಸ ಮನೆ ಮನೆಗಳಿಗೆ ತೆರಳಿ ಹರಿವು ಮೂಡಿಸಿ ಓಮಿಕ್ರಾನ್ ಹರಡುತ್ತಿರುವ ಹಿನ್ನಲೆಯಲ್ಲಿ 2ನೇ ಡೋಸ್ ಮತ್ತು 3ನೇ ಡೋಸ್ ತೆಗೆದುಕೊಳ್ಳುವಂತೆ ಮನವರಿಕೆ ಮಾಡಲಾಗಿದೆ.
2. ವಾರ್ಡ್ ವ್ಯಾಪ್ತಿಯಲ್ಲಿ ಬರುವ 19ನೇ ಮುಖ್ಯ ರಸ್ತೆಯಲ್ಲಿ ಮರದ ಟೊಂಗೆಗಳನ್ನು ತೆರವುಗೊಳಿಸುವಂತೆ ಸದಸ್ಯರು ವಾರ್ಡ್ ಕಮಿಟಿ ಸಭೆಯಲ್ಲಿ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಅರಣ್ಯ ಇಲಾಖಾ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.
3. ವಾರ್ಡ್ ಸದಸ್ಯರಾದ ಶ್ರೀ ರಾಜಣ್ಣ , ಸದಸ್ಯರು ಶ್ರೀ ಉಮೇಶ್, ಸದಸ್ಯರು ಮತ್ತು ಶ್ರೀ ಆನಂದ್ ರವರುಗಳು ಪಶ್ಚಿಮ ಕಾರ್ಡ್ ರಸ್ತೆಯಲ್ಲಿರುವ ಕಸದ ವಿಲೇವಾರಿ ಘಟಕ ಬದಲಾವಣೆ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಬೇರೆ ಸ್ಥಳ ಇಲ್ಲದಿರುವ ಕಾರಣದಿಂದ ಸ್ಥಳ ಬದಲಾವಣೆ ಕಷ್ಟಕರವಾಗಿರುತ್ತದೆ ಎಂದು ತಿಳಿಸುತ್ತಾ, ಘನತ್ಯಾಜ್ಯ ವಿಭಾಗದ ಅಧಿಕಾರಿಗಳಿಗೆ ಆದಷ್ಟು ಬೇಗನೆ ಸುತ್ತಲೂ ಬ್ಯಾರಿಕೇಡ್ ಹಾಕುವಂತೆ ಸೂಚಿಸಿದರು.
4. ನೋಡಲ್ ಅಧಿಕಾರಿಗಳು ಸಭೆಯಲ್ಲಿ ಜಲ ಮಂಡಳಿ ಅಧಿಕಾರಿಗಳಿಗೆ ಮ್ಯಾನ್ ಹೋಲ್ ಬ್ಲಾಕ್ ಆದರೆ, ಅದನ್ನು ಎಷ್ಟು ದಿನದಲ್ಲಿ ಅದನ್ನು ಸರಿಪಡಿಸಲಾಗುವುದು ಎಂದು ಸಭೆಯಲ್ಲಿ ಕೇಳಿದರು. ಇದಕ್ಕೆ ಉತ್ತರವಾಗಿ ಬಿ.ಡ್ಬ್ಲ್ಯೂ.ಎಸ್.ಎಸ್. ಬಿ ಅಧಿಕಾರಿಗಳು 24 ಗಂಟೆ ಒಳಗಾಗಿ ಸರಿಪಡಿಸುವುದಾಗಿ ತಿಳಿಸಿದರು.
5. ವಾರ್ಡ್ ಸದಸ್ಯರಾದ ಶ್ರೀ ಶ್ರೀ ಉಮೇಶ್, ಸದಸ್ಯರು , ಶ್ರೀ ಆನಂದ್ ಮತ್ತು ಶ್ರೀ ಸುರೇಶ್ ಗಡಗೋಳಿ, ರವರು ವಾರ್ಡಿನ ಕೆಲವು ರಸ್ತೆಗಳಲ್ಲಿ ಒಣಗಿರುವ ಕೆಲವು ಮರದ ಟೊಂಗೆಗಳು ನೇತಾಡುತ್ತಿದ್ದು, ಅದನ್ನು ತುರ್ತಾಗಿ ತೆರವುಗೊಳಿಸುವಂತೆ ಸಭೆಯಲ್ಲಿ ಕೋರಿದರು. ಇದಕ್ಕೆ ಉತ್ತರವಾಗಿ ನೋಡಲು ಅಧಿಕಾರಿಗಳು ಅರಣ್ಯ ಇಲಾಖೆಯವರಿಗೆ ಬೇಗನೆ ತೆರವುಗೊಳಿಸುವಂತೆ ಸೂಚಿಸಿದರು.

Scanned by CamScanner

6. ವಾರ್ಡ್ ಸದಸ್ಯರಾದ ಶ್ರೀ ಶ್ರೀನಿವಾಸ್. ರವರು ವಿಶ್ವೇಶ್ವರಯ್ಯ ವಾಣಿಜ್ಯ ಸಂಕೀರ್ಣದಲ್ಲಿರುವ ಡಾ॥ ಕಲಾಕ್ಷೇತ್ರದ ಕಾಮಗಾರಿಗಳ ಕಡತವನ್ನು ಮುಂದಿನ ವಾರ್ಡ್ ಕಮಿಟಿ ಸಭೆಗೆ ಹಾಜರು ಪಡಿಸುವಂತೆ ವಾರ್ಡ್ ಅಭಿಯಂತರರಿಗೆ ಕೋರಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

7. ವಾರ್ಡಿನ ಸದಸ್ಯರು, ವಾರ್ಡಿನ ರಸ್ತೆಗಳಲ್ಲಿ ಬೆಸ್ಕಾಂ ರವರು ರಸ್ತೆ ಅಗೆದು, ಅದನ್ನು ಸರಿಯಾಗಿ ರೆಸ್ಟೋರೇಷನ್ ಮಾಡದೆ ಇರುವ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡಿನ ಅಭಿಯಂತರರಿಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

8. ವಾರ್ಡ್ ಸದಸ್ಯರು ಕೋವಿಡ್-19 ಓಮಿಕ್ರಾನ್ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಈಗಾಗಲೇ ಸಾಕಷ್ಟು ವ್ಯಾಕ್ಸಿನೇಷನ್ ನೀಡಲಾಗಿದ್ದು, ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

9. ವಾರ್ಡ್ ವ್ಯಾಪ್ತಿಯಲ್ಲಿ ಆರ್.ಓ. ಪ್ಲಾಂಟ್‌ಗಳು ಕಾರ್ಯ ನಿರ್ವಹಿಸದೆ ಇರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡಿನ ಅಭಿಯಂತರರಿಗೆ ಸೂಚಿಸಿದರು.

10. ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಯಲ್ಲಿ ಹಳೇಯ ವಾಹನಗಳು ನಿಂತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರು ಸರ್ಕಾರದಿಂದ ಈಗಾಗಲೇ ಆದೇಶ ಹೊರಡಿಸಿದ್ದು, ವಾಹನ ಮಾಲೀಕರಿಗೆ ನೋಟಿಸ್ ನೀಡಿ ಅವುಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

11. ನೋಡಲ್ ಅಧಿಕಾರಿಗಳು ಮಾರ್ಷಲ್‌ಗಳಿಗೆ ಸಾರ್ವಜನಿಕ ಸ್ಥಳಗಳಲ್ಲಿ ಕಸ ಹಾಕಿದವರ ಮೇಲೆ ದಂಡ ವಿಧಿಸುವಂತೆ ಸೂಚಿಸಿದರು.

12. ವಾರ್ಡ್ ವ್ಯಾಪ್ತಿಯಲ್ಲಿ ಬರುವ 12ನೇ ಮುಖ್ಯ ರಸ್ತೆಯಲ್ಲಿ ಆಂಜನೇಯ ಸ್ವಾಮಿ ದೇವಸ್ಥಾನದ ಹತ್ತಿರ ಕೇಬಲ್ ಸಾಮಾಗ್ರಿಗಳನ್ನು ಸಂಗ್ರಹಿಸಿದ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

Scanned by CamScanner